# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(6)ಪಿಆರ್/ಇ-60367/23-24

ಮುಖ್ಯ ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 29.2.24.

ಮುಖ್ಯ ಮಾಹಿತಿ ಅಧಿಕಾರಿ (ಮಾಹಿತಿ ತಂತ್ರಜ್ಞಾನ) ರವರ ಕಛೇರಿ
ಸಂಖ್ಯೆ: 1491
ದಿನಾಂಕ: 21/03/2024
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಎನ್.ಆರ್.ಸ್ಕ್ವೇರ್, ಬೆಂಗಳೂರು

## ಕಛೇರಿ ಆದೇಶ

ವಿಷಯ: ಕು|| ಕೀರ್ತಿ ಕಟ್ಟೀಮನಿ, ಸಹಾಯಕ ಅಭಿಯಂತರರು ರವರನ್ನು ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸುವ ಬಗ್ಗೆ.

ಉಲ್ಲೇಖ: 1) ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ) ರವರ ಜ್ಞಾಪನ ಪತ್ರ ಸಂಖ್ಯೆ: ಸಿ.ಬಿ.ಎಸ್/21/ಸ.ಇಂ/ವರ್ಗಾವಣೆ/ಇ.ಎಸ್.ಸಿ/2023-24, ದಿ: 13-02-2024
2) ಕು|| ಕೀರ್ತಿ ಕಟ್ಟೀಮನಿ, ಸಹಾಯಕ ಅಭಿಯಂತರರು ರವರ ಮನವಿ ದಿ: 20-02-2024
3) ಸಂಖ್ಯೆ: ಬಿ12(6)ಪಿಆರ್/56/23-24, ದಿನಾಂಕ: 05-07-2023ರ ಸುತ್ತೋಲೆ

-----------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕು|| ಕೀರ್ತಿ ಕಟ್ಟೀಮನಿ, ಸಹಾಯಕ ಅಭಿಯಂತರರು, ಲೋಕೋಪಯೋಗಿ ಇಲಾಖೆಯಿಂದ ಎರವಲು ಸೇವೆಯ ಮೇಲೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ-ಟಿ.ಇ.ಸಿ) ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಇವರ ಸೇವೆಯನ್ನು ಉಲ್ಲೇಖ-(1)ರ ಜ್ಞಾಪನ ಪತ್ರದಲ್ಲಿ ನಗರಾಭಿವೃದ್ಧಿ ಇಲಾಖೆಯಿಂದ ಹಿಂಪಡೆದು, ಲೋಕೋಪಯೋಗಿ ವಿಭಾಗ, ಬಾಗಲಕೋಟೆ ಇಲ್ಲಿ ಖಾಲಿ ಇರುವ ಸಹಾಯಕ ಅಭಿಯಂತರರ ಹುದ್ದೆಗೆ ನಿಯೋಜಿಸಿ ಆದೇಶಿಸಿದ್ದು, ಈ ಸಂಬಂಧ ಸದರಿ ಅಭಿಯಂತರರು ಉಲ್ಲೇಖ-(2)ರಂತೆ ಮನವಿ ಸಲ್ಲಿಸಿ ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸಲು ಕೋರಿರುವುದರಿಂದ, ಸದರಿಯವರನ್ನು ಈ ಕೆಳಕಂಡ ಷರತ್ತಿಗೊಳಪಡಿಸಿ ದಿನಾಂಕ: 01-03-2024ರ ಅಪರಾಹ್ನದಿಂದ ಅನ್ವಯವಾಗುವಂತೆ ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸಿ ಆದೇಶಿಸಿದೆ.

**ಷರತ್ತುಗಳು :-**

1. ಸದರಿ ಅಭಿಯಂತರರು ನಗರ ಪಾಲಿಕೆಯ ಸೇವಾ ಅವಧಿಯಲ್ಲಿ ನಗರ ಪಾಲಿಕೆಗೆ ಯಾವುದೇ ಆರ್ಥಿಕ ಬಾಕಿಯನ್ನು ಉಳಿಸಿಕೊಂಡಿದ್ದಲ್ಲಿ ಸದರಿಯವರಿಂದ ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ .
2. ಸದರಿ ಅಭಿಯಂತರರ ವಿರುದ್ಧ ಇಲಾಖಾ ವಿಚಾರಣೆ ಬಾಕಿ ಇದ್ದಲ್ಲಿ ನಿಯಮಾನುಸಾರ ಕ್ರಮಜರುಗಿಸುವ ಷರತ್ತಿಗೊಳಪಡಿಸಿದೆ .
3. ಪಾಲಿಕೆಯ ಹಿಂದಿನ ವರ್ಷಗಳ ಆಡಿಟ್ ವರದಿಗಳಲ್ಲಿ ಯಾವುದೇ ಆರ್ಥಿಕ ಬಾಕಿಯನ್ನು ಸದರಿಯವರಿಂದ ವಸೂಲಾತಿ ಮಾಡಲು ಸೂಚಿಸಿದಲ್ಲಿ , ಅಂತಹ ಮೊತ್ತವನ್ನು ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಅವುಗಳಿಗೆ ಸಮರ್ಪಕ ಉತ್ತರ ನೀಡುವ ಷರತ್ತು ವಿಧಿಸಿದೆ .
4. ಸದರಿಅಭಿಯಂತರರು ನಗರ ಪಾಲಿಕೆಯ ವಸತಿಗೃಹದಲ್ಲಿ ವಾಸಿಸುತ್ತಿದ್ದಲ್ಲಿ ಕೂಡಲೇ ತೆರವುಗೊಳಿಸುವ ಷರತ್ತಿಗೊಳಪಡಿಸಿದೆ .
5. ವಾಕಿ ಟಾಕಿ , ಮೊಬೈಲ್ ಫೋನ್ , ಸಿಮ್ ಕಾರ್ಡ್ , ಹೆಲ್ಮಾರ್ಡ್ , ಗುರುತಿನ ಚೀಟಿ (Identity card) ಹಾಗೂ ಲ್ಯಾಪ್ ಟಾಪ್ ಗಳನ್ನು ಪಾಲಿಕೆಯಿಂದ ಪಡೆದಿದ್ದಲ್ಲಿ ಇವುಗಳನ್ನು ಪಾಲಿಕೆಗೆ ಹಿಂದಿರುಗಿಸುವ ಷರತ್ತಿಗೊಳಪಡಿಸಿದೆ .

ಮೇಲ್ಕಂಡ ಆದೇಶದನ್ವಯ ಹಾಗೂ ಮಾನ್ಯ ಮುಖ್ಯ ಆಯುಕ್ತರು ರವರ ಉಲ್ಲೇಖ-(3)ರ ಸುತ್ತೋಲೆಯನ್ವಯ ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳುವುದು.

SDA
01/03/24

ಮಾನ್ಯ ಮುಖ್ಯ ಆಯುಕ್ತರು ರವರ ಆದೇಶದ ಮೇರೆಗೆ)

29/2

ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

29/2/2024 29/2/24

**ಪ್ರತಿಯನ್ನು:**

: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಕಾರ್ಯಾಲಯಕ್ಕೆ ಕಳುಹಿಸಿದೆ.
: ವಿಶೇಷ ಆಯುಕ್ತರು (ಯೋಜನೆ) / ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಸರ್ಕಾರದ ಅಧೀನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ರವರಿಗೆ ಕಳುಹಿಸಿದೆ
: ಸರ್ಕಾರದ ಅಧೀನ ಕಾರ್ಯದರ್ಶಿಗಳು, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಬೆಂಗಳೂರು ರವರಿಗೆ ಕಳುಹಿಸಿದೆ.
: ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರಿಗೆ ಕಳುಹಿಸಿದೆ.
: ಮುಖ್ಯ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ) ರವರಿಗೆ ಕಳುಹಿಸಿದೆ.
: ಕಾರ್ಯಪಾಲಕ ಇಂಜಿನಿಯರ್, ಲೋ.ಇ ವಿಭಾಗ, ಬಾಗಲಕೋಟೆ ರವರಿಗೆ ಕಳುಹಿಸಿದೆ.
: ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ-ಟಿ.ಇ.ಸಿ) ವಿಭಾಗ ರವರಿಗೆ ಕಳುಹಿಸಿದೆ.
: ನಿರ್ದೇಶಕರು, ಮಾಹಿತಿ ತಂತ್ರಜ್ಞಾನ / ಉಪ ಮುಖ್ಯ ಮಾಹಿತಿ ಅಧಿಕಾರಿ, ಬಿ.ಬಿ.ಎಂ.ಪಿ ರವರಿಗೆ ಕಳುಹಿಸಿದೆ.
: ಮುಖ್ಯ ಲೆಕ್ಕಾಧಿಕಾರಿ / ಮುಖ್ಯ ಲೆಕ್ಕ ಪರಿಶೋಧಕರು / ಉ.ನಿ (ಹಣಕಾಸು-ಕೇಂದ್ರ) ರವರಿಗೆ ಕಳುಹಿಸಿದೆ.
: ಸಂಬಂಧಪಟ್ಟ ಅಭಿಯಂತರರಿಗೆ / ಕಛೇರಿ ಪ್ರತಿ.